ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಪದೋನ್ನತಿ ಕುರಿತು

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-

746 (965) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪೂರ್ಣಕಾಲಿಕವಾಗಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಚಾರ್ಯರುಗಳ ಸಂಖ್ಯೆ ಎಷ್ಟು ; (ಕಾಲೇಜುವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಚಾರ್ಯರ ಹುದ್ದೆಗಳೆಷ್ಟು ; ಇವುಗಳನ್ನು ಅರ್ಹ ಉಪನ್ಯಾಸಕರುಗಳಿಂದ ಪ್ರಾಚಾರ್ಯರ ಹುದ್ದೆಗೆ ಪದೋನ್ನತಿ ನೀಡಲು ಕೈಗೊಂಡ ಕ್ರಮವೇನು ; ಖಾಲಿ ಇರುವ ಪ್ರಾಚಾರ್ಯರ ಹುದ್ದೆಗಳಲ್ಲಿ ಪ್ರಭಾರಿ ಪ್ರಾಚಾರ್ಯರುಗಳು ಸೇವೆ ಸಲ್ಲಿಸುತ್ತಿರುವುದರಿಂದ ಕಾಲೇಜುಗಳಲ್ಲಿ ದೈನಂದಿನ ಕಾರ್ಯಗಳು ಸುಗಮವಾಗಿ ಸಾಗದೆ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಈ) ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿಯಲ್ಲಿ ಪತ್ರಾಂಕಿತ ಸಿಬ್ಬಂದಿಗಳಿಲ್ಲದೆ ದೈನಂದಿನ ಕಾರ್ಯ ನಿರ್ವಹಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನಿರ್ದೇಶಕರ ಕಛೇರಿಯಲ್ಲಿರುವ 13 ಶಾಖಾಧಿಕಾರಿಗಳ ಹುದ್ದೆಗಳನ್ನು ಅವಶ್ಯಕತೆ ಇರುವ ಜಿಲ್ಲೆಗೆ ಸ್ಥಳಾಂತರಿಸುವ ಕಾರ್ಯವು ಸರ್ಕಾರದ ಹಂತದಲ್ಲಿದೆಯೇ ; ಇದ್ದಲ್ಲಿ, ಸ್ಥಳಾಂತರ ಮಾಡುವುದು ಯಾವಾಗ ?